**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/01/ಎಂಎಸ್‌ಸಿ/2017

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು–560001,
ದಿನಾಂಕ:21.12.2018

**ಸುತ್ತೋಲೆ**

ವಿಷಯ: ಡಿ ವರ್ಗದ ಸಿಬ್ಬಂದಿಗಳ ಸೇವೆಯನ್ನು ಹೊರ ಸಂಪನ್ಮೂಲ ಏಜೆನ್ಸಿ ಮುಖಾಂತರ ಹೊರಗುತ್ತಿಗೆ ಮೇರೆಗೆ ನೇಮಕಾತಿಯಾದ ಸಿಬ್ಬಂದಿಗಳ ಹಾಜರಾತಿ ವಹಿ ನಿರ್ವಹಿಸುವ ಬಗ್ಗೆ.

ಉಲ್ಲೇಖ: ೧ ನಿರ್ದೇಶನಾಲಯದ ಪತ್ರ ಸಂಖ್ಯೆ: ಡಿಟಿಇ 42 ಇಎಸ್‌ಟಿ(3) 2017, ದಿ:10.08.2018

೨ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ: ಡಿಟಿಇ/01/ಎಂಎಸ್‌ಸಿ/2017 ಭಾಗ–2 ದಿನಾಂಕ:31.10.2018.

*-*-*-*

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(೧)ರ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಕಛೇರಿಯ ಹಾಗೂ ಕಾರ್ಯಗಾರದಲ್ಲಿನ ಗ್ರೂಪ್ ಡಿ ಹುದ್ದೆಗಳಿಗೆ ಹೊರ ಗುತ್ತಿಗೆ ಮೇರೆಗೆ, ಸೇವೆ ಒದಗಿಸಲು ಮೆ ಆಬ್ಜೆಕ್ಟ್ ಟೆಕ್ನಾಲಜೀಸ್, ಬೆಂಗಳೂರು ಮತ್ತು ಮೆ ಮಾತಾ ಟೆಕ್ನಾಲಜೀಸ್, ದಾರವಾಡ ಈ 02 ಸಂಸ್ಥೆಗಳಿಗೆ ಅನುಮೋದನೆ ನೀಡಲಾಗಿದೆ. ಅದರಂತೆ ತಮ್ಮ ಸಂಸ್ಥೆಗಳ ಹೊರ ಗುತ್ತಿಗೆ ಮೇರೆಗೆ ಸಿಬ್ಬಂದಿಯನ್ನು ಒದಗಿಸುವುದಾಗಿ ನಿಬಂಧನೆ ಮತ್ತು ಷರತ್ತುಗಳಲ್ಲಿನ ಕ್ರಮ ಸಂ. 3 ರಲ್ಲಿ ತಿಳಿಸಿರುವ ಹಾಗೆ ಸಂಸ್ಥೆಯ ಸಿಬ್ಬಂದಿಗಳ ಹಾಜರಾತಿ ವಹಿಯನ್ನು ಪ್ರತ್ಯೇಕವಾಗಿ ನಿರ್ವಹಿಸಲು ತಿಳಿಸಲಾಗಿದೆ. ಈ ನಿಟ್ಟಿನಲ್ಲಿ ಉಲ್ಲೇಖ(2)ರ ಸುತ್ತೋಲೆಯಲ್ಲಿ ಹಾಜರಾತಿಯನ್ನು ಸರಿಯಾದ ಸಮಯಕ್ಕೆ ಹಾಗೂ ವಹಿಸಬೇಕಾದ ಕ್ರಮದ ಬಗ್ಗೆ ತಿಳಿಸಲಾಗಿತ್ತು. ಆದರೂ ಸಹ ಕೆಲವು ಸಂಸ್ಥೆಗಳು ಕಳುಹಿಸಿರುವ ಹಾಜರಾತಿಯ ಮಾಹಿತಿಯು ಸರಿಯಾಗಿರುವುದಿಲ್ಲ. ಆದ್ದರಿಂದ **ಹಾಜರಾತಿ ವಹಿ ಅನುಗುಣವಾಗಿ ಮುಖ ಪತ್ರದಲ್ಲಿ ನಿಖರವಾದ ಮಾಹಿತಿಯನ್ನು** ಉಲ್ಲೇಖ(2)ರ ಸುತ್ತೋಲೆಯಲ್ಲಿ ತಿಳಿಸಲಾಗಿರುವ **ಕೋಷ್ಟಕದಂತೆ ಭರ್ತಿ ಮಾಡಿ ನಿರ್ದೇಶನಾಲಯಕ್ಕೆ ಪ್ರತಿ ತಿಂಗಳು 5ನೇ ತಾರೀಖಿನೊಳಗೆ ಮತ್ತು ಒಂದು ಪ್ರತಿಯನ್ನು ಹೊರಗುತ್ತಿಗೆ ಪಡೆದಿರುವ ಸಂಸ್ಥೆಗೆ ಕಳುಹಿಸಿಕೊಡಲು ಸೂಚಿಸಿದೆ.** ಇದರಲ್ಲಿ ವಿಳಂಬವಾದರೆ ಆಯಾ ಸಂಸ್ಥೆಗಳ ಪ್ರಾಂಶುಪಾಲರು ಜವಾಬ್ದಾರರಾಗಿರುತ್ತಾರೆ.

ಆಡಳಿತಾಧಿಕಾರಿ
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ,

* ೨ - ಆಡಳಿತ ವಿಭಾಗ

೧) ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿನದ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರುಗಳ ಮುಂದಿನ ಸೂಕ್ತ ಕ್ರಮಕ್ಕಾಗಿ.

೨) ಕಡತಕ್ಕೆ.